ದೊಡ್ಡಬಳ್ಳಾಪುರ–ದೇವನಹಳ್ಳಿ ತಾಲ್ಲೂಕುಗಳ 45 ಕಂದಾಯ ಹಳ್ಳಿಗಳಲ್ಲಿ ಸ್ಥಾಪಿಸಲು ತನ್ನ ಅನುಮೋದನೆಯನ್ನು ದಿನಾಂಕ 26ನೇ ಜೂನ್ 2013 ರಂದು ನೀಡಿರುತ್ತದೆ.

ಹೊಸ ಕಾಲೇಜು ಸ್ಥಾಪನೆ

867(913); ಡಾ॥ ಸುಧಾಕರ ಕೆ. (ಚಿಕ್ಕಬಳ್ಳಾಪುರ)

ಅ) ರಾಜ್ಯದಲ್ಲಿ 2014–15ನೇ ಸಾಲಿನಲ್ಲಿ ಹೊಸದಾಗಿ ಎಲ್ಲೆಲ್ಲಿ ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಸ್ಥಾಪಿಸಲಾಗಿದೆ;

ಆ) ಹೊಸ ವೈದ್ಯಕೀಯ ಕಾಲೇಜುಗಳನ್ನು ಯಾವಾಗ ಪ್ರಾರಂಭ ಮಾಡಲಾಗುವುದು; ಆರಂಭಕ್ಕೆ ನಡೆಸಿರುವ ಸಿದ್ದತೆ ಹೇಗಿದೆ. ಈಗಾಗಲೇ ಈ ನಿಟ್ಟಿನಲ್ಲಿ ಕೈಗೊಳ್ಳುವ ಕ್ರಮಗಳೇನು;

ಇ) ಈಗಾಗಲೇ ಆರಂಭವಾಗಿರುವ ಹೊಸ ವೈದ್ಯಕೀಯ ಕಾಲೇಜುಗಳ ಪೈಕಿ ಎಷ್ಟಕ್ಕೆ ಎಂಸಿಐ ನಿಂದ ಮಾನ್ಯತೆ ದೊರಕಿದೆ; ಯಾವ ಕಾಲೇಜಿಗೆ ಎಂಸಿಐ ನೀಡಿಕೆಯಲ್ಲಿ ವಿಳಂಬ ಆಗುತ್ತಿದೆ;

ಈ) ವೈದ್ಯಕೀಯ ಕಾಲೇಜು ಪರವಾನಗಿ ನೀಡಲು ಇರುವ ನಿಯಮಗಳು ಯಾವುವು;

ಉ) ರಾಜ್ಯದಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದರೆ ಎಲ್ಲಿ ಆರಂಭಿಸಲಾಗುವುದು;

ಊ) ಸರ್ಕಾರಿ ಕೋಟಾದಡಿ ವೈದ್ಯಕೀಯ ಶಿಕ್ಷಣ ಪಡೆಯುವವರಿಗೆ ಗ್ರಾಮೀಣ ಭಾಗದಲ್ಲಿ ಸೇವೆ ಕಡ್ಡಾಯಗೊಳಿಸಿದಂತೆ ಆಯುಷ್ ವಿದ್ಯಾರ್ಥಿಗಳಿಗೂ ಇದೇ ನಿಯಮ ಜಾರಿಗೆ ತರುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಡಾ॥ ಶರಣಪ್ರಕಾಶ ಆರ್. ಪಾಟೀಲ್ (ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಮತ್ತು ಆ) ಚಾಮರಾಜನಗರ, ಕೊಡಗು, ಕಾರವಾರ, ಕೊಪ್ಪಳ, ಗದಗ ಮತ್ತು ಗುಲ್ಬರ್ಗಾ ಇಲ್ಲಿ 06 ಹೊಸ ವೈದ್ಯಕೀಯ ಕಾಲೇಜುಗಳನ್ನು 2014–15ನೇ ಸಾಲಿನಿಂದ ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, 150 ಎಂಬಿಬಿಎಸ್ ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಈ ಕಾಲೇಜುಗಳ ಸ್ಥಾಪನೆಗಾಗಿ ಎಂಸಿಐ ಹಾಗೂ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ. ಪ್ರಸ್ತುತ ಸದರಿ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೆಳಕಂಡ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ವೈದ್ಯಕೀಯ ಕಾಲೇಜುಗಳ ವಿವರ	ಕಾಮಗಾರಿಯ ಅಂದಾಜು ಮೊತ್ತ
1. ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ	₹ 118.56 ಕೋಟಿ
2. ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು	₹ 136.00 ಕೋಟಿ
3. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ	₹ 120.00 ಕೋಟಿ
4. ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ	₹ 120.00 ಕೋಟಿ
5. ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ	₹ 120.00 ಕೋಟಿ
6. ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ	₹ 120.00 ಕೋಟಿ

ಇ) ಉದ್ಭವಿಸುವುದಿಲ್ಲ.

ಈ) ಎಂಸಿಐ 150 ವಿದ್ಯಾರ್ಥಿಗಳ ಪ್ರವೇಶಕ್ಕೆ ನಿಗದಿಪಡಿಸಿರುವ "Minimum Requirements for 150 MBBS Admissions Annually Regulations, 1999" ರನ್ವಯ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಅಗತ್ಯ ಸೌಲಭ್ಯಗಳಾದ ಭೂಮಿಯ ಲಭ್ಯತೆ, ಬೋಧಕ ಆಸ್ಪತ್ರೆ, ವೈದ್ಯರ, ದಾದಿಯರ ಮತ್ತು ವಿದ್ಯಾರ್ಥಿಗಳ ವಸತಿ ನಿಲಯ, ಗ್ರಂಥಾಲಯ ಹೊಂದಿದ ಕಾಲೇಜು ಕಟ್ಟಡ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಲಭ್ಯತೆಯ ಅತ್ಯಾವಶ್ಯಕವಾಗಿ ಬೇಕಾಗಿದೆ.

ಉ) ಹೌದು. ಮುಂಬರುವ ಶೈಕ್ಷಣಿಕ ಸಾಲುಗಳಲ್ಲಿ ರಾಜ್ಯದ ಇನ್ನಿತರ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಅನುದಾನ ಲಭ್ಯತೆಯನ್ನು ಆಧರಿಸಿ ಸ್ಥಾಪಿಸಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.

ಊ) ಇಲ್ಲ.

ಆದರೆ ಆಯುಷ್ ವಿದ್ಯಾರ್ಥಿಗಳಿಗೆ ಕಲಿಕಾ ವೈದ್ಯರ ಅವಧಿಯಲ್ಲಿ (House Surgeon) ಕನಿಷ್ಟ ಎರಡು ತಿಂಗಳು ಗ್ರಾಮೀಣ ಪ್ರದೇಶದಲ್ಲಿರುವ ಆಯುಷ್ ಆಸ್ಪತ್ರೆ / ಚಿಕಿತ್ಸಾಲಯಗಳಲ್ಲಿ ಕಾರ್ಯನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರಿ ಆಸ್ಪತ್ರೆಗಳು

868(914); ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅದರ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು (ಜಿಲ್ಲಾವಾರು ವಿವರ ನೀಡುವುದು);

ಆ) ಮೇಲ್ಕಂಡ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಹಾಸಿಗೆಗಳ ವೈದ್ಯರುಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು;